# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 140 |
| ಸದಸ್ಯರ ಹೆಸರು | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.02.2023. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಕ್ರಮ ಮರಳು ಸಾಗಾಣಿಕೆ ನಿಯಂತ್ರಿಸಲು ಸರ್ಕಾರ ಇದುವರೆವಿಗೂ ಕೈಗೊಂಡ ಕ್ರಮಗಳೇನು; ದಾಖಲಾದ ಕೇಸ್ ಗಳು ಎಷ್ಟು; (ವಿವರ ನೀಡುವುದು) | ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮ ಕೈಗೊಂಡಿರುತ್ತದೆ.<br><br>• ಹೊಸ ಮರಳು ನೀತಿ, 2020 ರಂತೆ ಸರ್ಕಾರವು, ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 2021 ನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br><br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br><br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A), 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 31-Rರ ಉಪ ನಿಯಮ 12 ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br><br>• ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಲ್ಲಿ ಸಂಗ್ರಹವಾಗುವ ಒಟ್ಟು ಮೊತ್ತದಲ್ಲಿ ಆಡಳಿತಾತ್ಮಕ ವೆಚ್ಚಕ್ಕಾಗಿ ಮೀಸಲಿರಿಸಿರುವ ಶೇ. 4 ರಷ್ಟು ಮೊತ್ತವನ್ನು ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು ಮತ್ತು ಸಾಗಾಣಿಕೆಯನ್ನು ನಿಯಂತ್ರಿಸುವ - |

-ಸಂಬಂಧ ತನಿಖಾ ಠಾಣೆಗಳನ್ನು ಸ್ಥಾಪಿಸಲು, ಗೃಹ ರಕ್ಷಕ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಹಾಗೂ ಇನ್ನಿತರ ಖರ್ಚು ವೆಚ್ಚಗಳಿಗೆ ಸಂಬಂಧಪಟ್ಟಂತೆ ಬಳಸಿಕೊಳ್ಳಲು ನಿಯಮಾವಳಿಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ.

- ಅದರಂತೆ, ಕಲಬುರಗಿ ಜಿಲ್ಲಾ ಮರಳು ಸಮಿತಿಯಿಂದ, ಜಿಲ್ಲಾ ವ್ಯಾಪ್ತಿಯಲ್ಲಿ 10 ತಾತ್ಕಾಲಿಕ ತನಿಖಾ ಠಾಣೆಗಳನ್ನು ಹಾಗೂ ಯಾದಗಿರಿ ಜಿಲ್ಲಾ ಮರಳು ಸಮಿತಿಯಿಂದ ಜಿಲ್ಲಾ ವ್ಯಾಪ್ತಿಯಲ್ಲಿ 02 ತಾತ್ಕಾಲಿಕ ತನಿಖಾ ಠಾಣೆಗಳನ್ನು ಪ್ರಾರಂಭಿಸಿ, ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ.

- ಅಲ್ಲದೆ, ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಿ, ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ.

- ಮೇಲ್ಕಂಡಂತೆ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ 2020-21 ನೇ ಸಾಲಿನಿಂದ 2022-23 ನೇ ಸಾಲಿನ ಜನವರಿ-2023 ರ ಅಂತ್ಯದವರೆಗೆ ಅನಧಿಕೃತ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆಯಡಿಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಕೈಗೊಂಡ ಕ್ರಮದ ವಿವರಗಳು ಈ ಕೆಳಕಂಡಂತಿರುತ್ತವೆ.

| ಜಿಲ್ಲೆ | ವರ್ಷ | ಅನಧಿಕೃತ ಮರಳು ಗಣಿಗಾರಿಕೆ | | | ಅನಧಿಕೃತ ಮರಳು ಸಾಗಾಣಿಕೆ | | | ಅನಧಿಕೃತ ಮರಳು ದಾಸ್ತಾನು | | |
|---|---|---|---|---|---|---|---|---|---|---|
| | | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳು | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (₹ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳು | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (₹.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳು |
| ಕಲಬುರಗಿ | 2020-21 | 3 | 5.9 | 0 | 188 | 23.19 | 143 | 46 | 7.75 | 44 |
| | 2021-22 | 4 | 0.70 | 2 | 288 | 48.36 | 168 | 29 | 4.54 | 23 |
| | 2022-23 | 2 | 0.53 | 2 | 145 | 29.5 | 141 | 26 | 2.91 | 26 |
| ಯಾದಗಿರಿ | 2020-21 | 0 | 0 | 0 | 119 | 8 | 108 | 3 | 0 | 3 |
| | 2021-22 | 5 | 1.5 | 2 | 136 | 41.83 | 62 | 17 | 0.92 | 16 |
| | 2022-23 | 6 | 4.0 | 3 | 79 | 18 | 33 | 9 | 0 | 8 |

| | | |
|---|---|---|
| ಆ) | ಈ ಅಕ್ರಮ ಮರಳು ಸಾಗಾಣಿಕೆಯ ವೇಳೆ ವಶಪಡಿಸಿಕೊಂಡ ಮರಳಿನ ಪ್ರಮಾಣ ಎಷ್ಟು ಮತ್ತು ಸದರಿ ಮರಳನ್ನು ಯಾವ ರೀತಿ ವಿಲೇವಾರಿ ಮಾಡಲಾಗುತ್ತದೆ; (ವಿವರ ನೀಡುವುದು) | ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 43(6) ಮತ್ತು 43-A(2) ರಂತೆ ಪ್ರತಿ ಮೆಟ್ರಿಕ್ ಟನ್ ಮರಳಿಗೆ ₹ 3,000/- ಗಳ ಕಾಂಪೌಂಡಿಂಗ್ ಶುಲ್ಕ, ರಾಜಧನ ಮತ್ತು ವಾಹನಗಳ ಸಾಮರ್ಥ್ಯಕ್ಕನುಗುಣವಾಗಿ ನಿಯಂತ್ರಣ ಶುಲ್ಕವನ್ನು ವಿಧಿಸಿ, ಸಂಗ್ರಹಿಸಲು ಅವಕಾಶ ಕಲ್ಪಿಸಲಾಗುತ್ತಿದೆ. ಅದರಂತೆ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಸಾಗಾಣಿಕೆಯಡಿಯಲ್ಲಿ ಕಾಂಪೌಂಡಿಂಗ್ ಶುಲ್ಕವನ್ನು ಸಂಗ್ರಹಿಸಿ, ಖನಿಜ ಸಮೇತ ವಾಹನಗಳನ್ನು ಬಿಡುಗಡೆಗೊಳಿಸಲಾಗುತ್ತಿದೆ.<br><br>ಮುಂದುವರೆದು, ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R (6) ರಂತೆ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯ ಸದಸ್ಯರುಗಳಿಂದ ಮಹಜರ್ ಮೂಲಕ ವಶಪಡಿಸಿಕೊಂಡ ಮರಳನ್ನು ಲೋಕೋಪಯೋಗಿ ಇಲಾಖೆಯಿಂದ ಅಥವಾ ಜಿಲ್ಲಾ ಮರಳು ಸಮಿತಿ ನಿರ್ಧರಿಸಿದ ಇಲಾಖೆಯಿಂದ, ಜಿಲ್ಲಾ ಮರಳು ಸಮಿತಿಯು ನಿಗದಿಪಡಿಸಿದ ದರದಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದ ಕಾಮಗಾರಿಗಳು ಅಥವಾ ಕಡಿಮೆ ವರಮಾನದ ವಸತಿ ಯೋಜನೆಗಳು ಅಥವಾ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯಿದೆ (MGNREGA) ಯೋಜನೆ ಕಾಮಗಾರಿಗಳಿಗೆ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಇ) | ಅಕ್ರಮ ಸಾಗಾಣಿಕೆ ವೇಳೆ ವಶಪಡಿಸಿಕೊಂಡ ಮರಳನ್ನು ವಿಲೇವಾರಿ ಮಾಡಿದ ನಂತರ ಸಂಗ್ರಹವಾದ ಹಣವೆಷ್ಟು, ಇದನ್ನು ಯಾವ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸಲಾಗುತ್ತದೆ? (ವಿವರ ನೀಡುವುದು) | ಕಲಬುರಗಿ ಹಾಗೂ ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಸಾಗಾಣಿಕೆಯಡಿಯಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43(6) ಮತ್ತು 43-A (2) ರಂತೆ ದಂಡವನ್ನು ಸಂಗ್ರಹಿಸಿ, ಖನಿಜ ಸಮೇತ ವಾಹನಗಳನ್ನು ಬಿಡುಗಡೆಗೊಳಿಸಲಾಗುತ್ತಿದೆ.<br><br>2020-21 ನೇ ಸಾಲಿನಿಂದ 2022-23 ನೇ ಸಾಲಿನ ಜನವರಿ-2023 ರ ಅಂತ್ಯದವರೆಗೆ ಸಂಗ್ರಹಿಸಲಾದ ದಂಡದ ಮೊತ್ತದ ವಿವರಗಳನ್ನು ಕಂಡಿಕೆ (ಅ) ರಲ್ಲಿ ನೀಡಲಾಗಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/39/2023

Halappa

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.